ದಿನಾಂಕ 26-06-2025 ರಂದು ಸಾಕ್ಷಿಯನ್ನು ಕರೆಯಿಸಿ ಸತ್ಯ ಪ್ರತಿಜ್ಞೆ ಬೋಧಿಸಲಾಯಿತು.

**ಮುಂದುವರೆದ ಮುಖ್ಯ ವಿಚಾರಣೆ: ವಾದಿ ಪರ ವಕೀಲರಿಂದ:**

ಓ.ಎಸ್.ನಂ.85/2025 ರ ವಾದ ಪತ್ರದ ದೃಢೀಕೃತ ಪ್ರತಿಯನ್ನು ನಿಪಿ 10 ಎಂದು ಗುರುತಿಸಲಾಯಿತು.

**ಪಾಟೀ ಸವಾಲು: ಪ್ರತಿವಾದಿ ಪರ ವಕೀಲರಿಂದ:**

ವಾದಪತ್ರ ಮತ್ತು ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರಕ್ಕೆ ಮಾಹಿತಿಯನ್ನು ನಾನೇ ನೀಡಿರುತ್ತೇನೆ. ಸದರಿ ವಿಷಯಗಳ ಬಗ್ಗೆ ನಾನು ತಿಳಿದುಕೊಂಡಿರುತ್ತೇನೆ. ನಾನು ಈ ಪ್ರಕರಣಕ್ಕೆ ಅನುಕೂಲವಾಗುವಂತೆ ಸುಳ್ಳು ಮಾಹಿತಿ ನೀಡಿ ವಂಶಾವಳಿ ನೀಡಿರುತ್ತೇನೆ ಎಂದರೆ ಸರಿಯಲ್ಲ. ದಾವಾ ಎ ಸ್ವತ್ತು ನಮ್ಮ ಪಿತ್ರಾರ್ಜಿತ ಆಸ್ತಿ ಎಂದು ತೋರಿಸಲು ದಾಖಲೆಗಳನ್ನು ನ್ಯಾಯಾಲಯಕ್ಕೆ ವಂಶವೃಕ್ಷ ಮತ್ತು ಆಧಾರ್ ಕಾರ್ಡ ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ. ನಿಪಿ 1 ರಿಂದ 4 ರ ದಾಖಲೆಗಳು 1 ಮತ್ತು 2 ನೇ ಪ್ರತಿವಾದಿಯ ಹೆಸರಿನಲ್ಲಿರುವ ದಾಖಲೆಗಳಾಗಿರುತ್ತವೆ ಎಂದರೆ ಸರಿ. ಸದರಿ ದಾಖಲೆಗಳಲ್ಲಿ ದಾವಾ ಆಸ್ತಿಯನ್ನು ಪಿತ್ರಾರ್ಜಿತ ಆಸ್ತಿ ಎಂದು ನಮೂದಿಸಿರುವುದಿಲ್ಲ ಎಂದರೆ ಸಾಕ್ಷಿ ಯಾವುದೇ ಉತ್ತರ ನೀಡಿರುವುದಿಲ್ಲ.

2. ದಾವಾ-ಬಿ ಸ್ವತ್ತು ಪಿತ್ರಾರ್ಜಿತ ಆಸ್ತಿ ಎಂದು ತೋರಿಸಲು ಯಾವುದೇ ದಾಖಲೆಗಳನ್ನು ಹಾಜರಪಡಿಸಿರುವುದಿಲ್ಲ ಎಂದರೆ ಸಾಕ್ಷಿ ಯಾವುದೇ ಉತ್ತರ ನೀಡಿರುವುದಿಲ್ಲ. ಸದರಿ ಎರಡೂ ಆಸ್ತಿಗಳು 1 ನೇ ಪ್ರತಿವಾದಿಯ ಸ್ವತಯಾರ್ಜಿತ ಆಸ್ತಿಯಾಗಿರುತ್ತವೆ ಎಂದರೆ ಸರಿ. 1 ನೇ ಪ್ರತಿವಾದಿಯ ಸಹೋದರರ ನಡುವೆ ಪಾಲುವಾಟ್ನಿಯಾದ ಕುರಿತು ಯಾವುದೇ ದಾಖಲೆಗಳನ್ನು ನಾನು ಹಾಜರುಪಡಿಸಿರುವುದಿಲ್ಲ. 1 ನೇ ಪ್ರತಿವಾದಿಯ ತಂದೆಯ ವಂಶಾವಳಿಯನ್ನು ಈ ದಾವೆಯಲ್ಲಿ ಹಾಜರುಪಡಿಸಿರುವುದಿಲ್ಲ ಎಂದರೆ ಸರಿಯಲ್ಲ. 1 ನೇ ಪ್ರತಿವಾದಿಯ ಸಹೋದರರ ನಡುವೆ ಪಾಲುವಾಟ್ನಿಯಾದ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ. ಈ ದಾವೆಗೆ ಅವಶ್ಯಕ ಪಕ್ಷಗಾರರನ್ನು ಸೇರಿಸಿರುವುದಿಲ್ಲ ಎಂದರೆ ಸರಿಯಲ್ಲ.

3. 2 ನೇ ವಾದಿಯು 1 ನೇ ಪ್ರತಿವಾದಿಯ ಜೊತೆ ಕೇವಲ 8 ತಿಂಗಳ ಕಾಲ

ಸಾಂಸಾರಿಕ ಜೀವನ ನಡೆಸಿದ್ದರು ಎಂದರೆ ಸರಿಯಲ್ಲ. ನನ್ನ ತಾಯಿ 1 ನೇ ಪ್ರತಿವಾದಿಯ ಜೊತೆ

ಅನ್ಯೋನ್ಯವಾಗಿ ಸಂಸಾರ ಮಾಡದ ಕಾರಣ ಹಾಗೂ ಪದೇ ಪದೇ ಜಗಳ ಮಾಡಿದ್ದ ಕಾರಣ ಪ್ರತ್ಯೇಕ ವಾಸ ಮಾಡಿದ್ದರು ಎಂದರೆ ಸರಿಯಲ್ಲ. ಸದರಿ ಮನಸ್ತಾಪದ ಕುರಿತು ಹಲವು ಬಾರಿ ರಾಜಿ ಪಂಚಾಯತಿ ನಡೆದಿರುತ್ತವೆ ಎಂದರೆ ಸರಿಯಲ್ಲ. ಪಂಚಾಯತಿ ರಾಜಿಯಲ್ಲಿ ನನ್ನ ತಾಯಿಗೆ ಶಾಶ್ವತ ಜೀವನಾಂಶ ನೀಡಿ ಪ್ರತ್ಯೇಕ ವಾಸ ಮಾಡಲು ಒಪ್ಪಿಕೊಂಡಿದ್ದರು ಎಂದರೆ ಸರಿಯಲ್ಲ.

4. 1 ನೇ ಪ್ರತಿವಾದಿ ಮತ್ತು 2 ನೇ ವಾದಿ ಪ್ರತ್ಯೇಕ ವಾಸವಾಗಿ ಅಂದಾಜು 35 ವರ್ಷಗಳಾಗಿವೆ ಎಂದರೆ ಸರಿ. ಆ ಸಮಯದಲ್ಲಿ 1 ನೇ ಪ್ರತಿವಾದಿಯ ಬಳಿ ನನ್ನ ತಾಯಿ ಯಾವುದೇ ಜೀವನಾಂಶ ಕೇಳಿರುವುದಿಲ್ಲ ಎಂದರೆ ಸರಿಯಲ್ಲ. ಆ ಕುರಿತು ನಮ್ಮ ಬಳಿ ಯಾವುದೇ ದಾಖಲೆಗಳು ಇರುವುದಿಲ್ಲ. ನನ್ನ ತಾಯಿ ಶಾಶ್ವತ ಜೀವನಾಂಶ ಪಡೆದ ಕಾರಣ 1 ನೇ ಪ್ರತಿವಾದಿಯ ವಿರುದ್ಧ ಯಾವುದೇ ಜೀವನಾಂಶ ಕೇಳಿರುವುದಿಲ್ಲ ಎಂದರೆ ಸರಿಯಲ್ಲ. ಅವರಿಬ್ಬರ ನಡುವೆ ಹೊಂದಾಣಿಕೆ ಬರದ ಕಾರಣ ಗ್ರಾಮಸ್ಥರು ಸೇರಿ 2 ನೇ ವಿವಾಹ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಪ್ರತಿವಾದಿಗಳಿಗೆ ತೊಂದರೆ ನೀಡುವ ಉದ್ದೇಶದಿಂದ ಸುಳ್ಳು ಪ್ರಕರಣ ದಾಖಲಿಸಿರುತ್ತೇವೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

ತೆ.ನ್ಯಾದಲ್ಲಿ ಬೆ.ಮಾಡಲಾಯಿತು. ನನ್ನ ಸಮಕ್ಷಮ

ಸಹಿ

ಓ ಹೇ ಕೆ ಸರಿ ಇದೆ. ಪ್ರಧಾನ ದಿವಾಣಿ ನ್ಯಾಯಾಧೀಶರು,
ರಾಣೇಬೆನ್ನೂರು.